ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ರಾಜ್ಯದಲ್ಲಿರುವ ನಿರ್ಮಿತಿ ಕೇಂದ್ರಗಳ ಬಗ್ಗೆ

ಶ್ರೀ ಕಾಂತರಾಜು(ಬಿಎಂಎಲ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

1044 (1278) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿ ಎಷ್ಟು ಜಿಲ್ಲಾ ನಿರ್ಮಿತಿ ಕೇಂದ್ರಗಳಿವೆ; ಇವುಗಳನ್ನು ಯಾವಾಗ ಸ್ಥಾಪನೆ ಮಾಡಲಾಯಿತು; ಇವುಗಳ ಧ್ಯೇಯೋದ್ಯೇಶಗಳೇನು; (ವಿವರವಾದ ಮಾಹಿತಿ ನೀಡುವುದು)

(ಆ) ತುಮಕೂರು ಜಿಲ್ಲಾ ನಿರ್ಮಿತಿ ಕೇಂದ್ರದಲ್ಲಿ ಹಾಲಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ನೌಕರರ ಹೆಸರು, ಹುದ್ದೆಯ ಪದನಾಮ, ವೇತನ ಶ್ರೇಣಿ, ತಿಂಗಳಿಗೆ ಪಡೆಯುತ್ತಿರುವ ಸಂಬಳದೊಂದಿಗೆ ವಿವರವಾದ ಮಾಹಿತಿ ನೀಡುವುದು)

(ಇ) ಇಲ್ಲಿನ ಸಿಬ್ಬಂದಿಗಳು ಎಷ್ಟು ವರ್ಷಗಳಿಂದ ಕೆಲಸ ನಿರ್ವಹಿಸುತ್ತಿದ್ದಾರೆ; (ಹುದ್ದೆವಾರು ವಿವರ ನೀಡುವುದು)

(ಈ) ಕಳೆದ ಐದು ವರ್ಷಗಳಿಂದ ತುಮಕೂರು ಜಿಲ್ಲಾ ನಿರ್ಮಿತಿ ಕೇಂದ್ರವು ಯಾವ ಯಾವ ಕಾಮಗಾರಿಗಳನ್ನು ಅನುಷ್ಠಾನಗೊಳಿಸಿ ಪೂರ್ಣಗೊಳಿಸಿದೆ; (ಇಲಾಖೆ, ಕಾಮಗಾರಿ ವಿವರ ಹಾಗೂ ಖರ್ಚು ಮಾಡಿದ ಮೊತ್ತದೊಂದಿಗೆ ಮಾಹಿತಿ ನೀಡುವುದು)

(ಉ) ಹಾಲಿ ಬಾಕಿ ಇರುವ ಕಾಮಗಾರಿಗಳು ಎಷ್ಟು; ಇವುಗಳನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು; ಇಲ್ಲಿಯವರೆಗೆ ಬಾಕಿ ಉಳಿಸಿಕೊಳ್ಳಲು ಕಾರಣಗಳೇನು? (ವಿವರವಾದ ಮಾಹಿತಿ ನೀಡುವುದು)